ಆ) ಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನು ಮಳೆ ಆಶ್ರಿತ ಖುಷ್ಕಿ ಜಮೀನಾಗಿದೆ. ಈ ಭೂಸ್ವಾಧೀನ ಕ್ರಮವನ್ನು ವಿರೋಧಿಸಿ ರೈತರಿಂದ ಯಾವ ಪ್ರತಿಭಟನೆಗಳೂ ವ್ಯಕ್ತವಾಗಿರುವುದಿಲ್ಲ.

ಇ) ಈಗಾಗಲೇ ಭೂಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸಿರುವ ಕಾರಣ, ಉದ್ದೇಶಿತ ಭೂಸ್ವಾಧೀನವನ್ನು ಕೈಬಿಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿಲ್ಲ. ಭೂಮಿ ಕಳೆದುಕೊಳ್ಳುವ ಭೂಮಾಲೀಕರಿಗೆ ಸೂಕ್ತ ಪರಿಹಾರವನ್ನು ನೀಡುವುದರೊಂದಿಗೆ ರೈತರ ಹಿತವನ್ನು ಕಾಪಾಡಲಾಗುತ್ತದೆ.

ಹಿನ್ನಿರಿನಿಂದ ಮುಳುಗಡೆಯಾದ ರೈತರ ಜಮೀನಿಗೆ ಪರಿಹಾರ

370 (952) ಶ್ರೀ ದೊಡ್ಡನಗೌಡ ಜಿ. ಪಾಟೀಲ್ (ಹುನಗುಂದ) :- ಮಾನ್ಯ ಜಲಸಂಪನ್ಮೂಲ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ನಾರಾಯಣಪುರ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾದ ಹುನಗುಂದ ತಾಲ್ಲೂಕಿನ ಗ್ರಾಮಗಳ ರೈತರ ಜಮೀನನ್ನು ಸರ್ಕಾರ ವಶಪಡಿಸಿಕೊಂಡಿದ್ದಕ್ಕಿಂತ ಹೆಚ್ಚಿನ ಪ್ರದೇಶದಲ್ಲಿ ಪ್ರತಿ ವರ್ಷ ನೀರು ನಿಂತು ರೈತರು ಬೆಳೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ:

ಆ) ಹಾಗಿದ್ದಲ್ಲಿ, ಸದರಿ ಹೆಚ್ಚುವರಿ ಭೂಮಿಯ ಬೆಳೆ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಕ್ಕೆಗೊಂಡಿದೆ (ಮಾಹಿತಿ ನೀಡುವುದು)?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ನಾರಾಯಣಪುರ ಜಲಾಶಯದ ಹಿನ್ನೀರಿನಿಂದ ಹುನಗುಂದ ತಾಲ್ಲೂಕಿನ ಗ್ರಾಮಗಳಲ್ಲಿ ಸ್ವಾಧೀನಪಡಿಸಿಕೊಂಡಿದ್ದಕ್ಕಿಂತ ಹೆಚ್ಚುವರಿ ಪ್ರದೇಶವು ಬಾಧಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಭೂಸ್ವಾಧೀನ ಪ್ರಕ್ರಿಯೆ ಅನುಮೋದನೆಗಾಗಿ ಪರಿಶೀಲನೆಯ ಹಂತದಲ್ಲಿದ್ದು, ಬೆಳೆ ಪರಿಹಾರದ ಪ್ರಶ್ನೆ ಉದ್ಭವಿಸುವುದಿಲ್ಲ.

ಇಂಡಿ ಏತ ನೀರಾವರಿ ಕಾಲುವೆ

371 (685) ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) :- ಮಾನ್ಯ ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:-